ಶ್ರೀ. S.R. ಪಾಟೀಲ್ ನಿ-72 (130)

<u>ಕರ್ನಾಟಕ ವಿಧಾನ ಪರಿಷತ್ತು</u>

ರಾಜ್ಯದ ಗ್ರಾಮೀಣ ಭಾಗದಲ್ಲಿ ಪ್ರಥಮ ಚಿಕಿತ್ಸಕರು ಅಧಿಕೃತ ಪದವಿ ಪಡೆದ ನುರಿತ ವೈದ್ಯರ ಆಸ್ಪತ್ರೆಗಳಲ್ಲಿ ಸುಮಾರು 5 ರಿಂದ 10 ವರ್ಷಗಳ ಕಾಲ ಪ್ರಥಮೋಪಚಾರದ ಅನುಭವವನ್ನು ಪಡೆದು ಅವರ ಮಾರ್ಗದರ್ಶನದಲ್ಲಿ ಹಾಗೂ ಗ್ರಾಮ ಪಂಚಾಯಿತಿಯಲ್ಲಿ ಅನುಮತಿ ಪಡೆದು ಗ್ರಾಮೀಣ ಭಾಗದಲ್ಲಿ ಪ್ರಥಮ ಚಿಕಿತ್ಸಕರಾಗಿ ಸೇವೆಯನ್ನು ಸಲ್ಲಿಸುತ್ತಿದ್ದಾರೆ. ಇತ್ತೀಚೆಗೆ 2007ರ ಕರ್ನಾಟಕ ಮೆಡಿಕಲ್ ಎಸ್ಟಾಬ್ಲಿಷ್‌ಮೆಂಟ್ ಆಕ್ಟ್ ಪ್ರಕಾರ ಸರ್ಕಾರವು ಗ್ರಾಮೀಣ ಪ್ರಥಮ ಚಿಕಿತ್ಸಕರನ್ನು ನಕಲಿಗಳೆಂದು ಪರಿಗಣಿಸಿ ಇವರ ಸೇವೆಯನ್ನು ತಡೆಹಿಡಿದಿರುತ್ತಾರೆ.

ಈ ಕಾರಣದಿಂದ ಬಹುತೇಕ ಗ್ರಾಮೀಣ ಭಾಗಗಳಲ್ಲಿ ಸರಿಯಾದ ವೈದ್ಯಕೀಯ ಸೌಲಭ್ಯ ಸಾರಿಗೆ ಸೌಲಭ್ಯಗಳಿಂದ ಗ್ರಾಮಗಳಲ್ಲಿ ಇವರುಗಳು ಸಾಮಾನ್ಯ ಖಾಯಿಲೆಗಳಾದ ನೆಗಡಿ, ಕೆಮ್ಮು, ಜ್ವರ ಇಂತಹ ಖಾಯಿಲೆಗಳಿಗೆ ಸಾಮಾನ್ಯ ನೋವು ಹಾಗೂ ನಂಜು ನಿವಾರಕ ಚುಚ್ಚು ಮದ್ದು ನೀಡಿ ಪ್ರಥಮ ಹಂತದ ಮಾತ್ರೆಗಳನ್ನು ಬರೆದುಕೊಟ್ಟು ಹೆಚ್ಚಿನ ಚಿಕಿತ್ಸೆಗಾಗಿ ನುರಿತ ವೈದ್ಯರ ಬಳಿ ಕಳುಹಿಸಿಕೊಡುವ ಕೆಲಸ ಸಂಪೂರ್ಣವಾಗಿ ನಿಂತು ಹೋಗಿರುತ್ತದೆ.

ಗ್ರಾಮೀಣ ಭಾಗಗಳಲ್ಲಿ ಜನರ ಆರೋಗ್ಯದ ಕಾಳಜಿಯನ್ನು ಕಾಪಾಡುವ ನಿಟ್ಟಿನಲ್ಲಿ ಗ್ರಾಮೀಣ ಪ್ರಥಮ ಚಿಕಿತ್ಸಕರಿಗೆ ತೆಲಂಗಾಣ ಹಾಗೂ ಸೀಮಾಂಧ್ರ ರಾಜ್ಯದ ಮಾದರಿಯಂತೆ ಸೂಕ್ತ ತರಬೇತಿ (ಎಲ್.ಎಂ.ಪಿ)ಯನ್ನು ನೀಡಿ ಇವರಿಗೆ ಮಾನ್ಯತೆಯನ್ನು ನೀಡಿ, ಇವರ ಸೇವೆಯನ್ನು ಮುಂದುವರೆಸುವ ಕುರಿತು ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಸ್.ಆರ್. ಪಾಟೀಲ್ ರವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಹೇಳಿಕೆ;

*******

ಕರ್ನಾಟಕ ಖಾಸಗೀ ವೈದ್ಯಕೀಯ ಸಂಸ್ಥೆಗಳ ಅಧಿನಿಯಮ, 2007ರ ಪ್ರಕಾರ "ವೈದ್ಯವೃತ್ತಿಗ" ಎಂದರೆ, ವೈದ್ಯ ವೃತ್ತಿಗನು ತಾನು ವ್ಯಾಸಂಗ ಮಾಡಿದ, ಅರ್ಹತೆ ಪಡೆದ ಮತ್ತು ನೋಂದಯಿತನಾದ ವೈದ್ಯ ಪದ್ಧತಿಯಲ್ಲಿ ವೃತ್ತಿ ನಡೆಸುವುದಕ್ಕಾಗಿ ಹೋಮಿಯೋಪತಿ ವೃತ್ತಿಗರ ಅಧಿನಿಯಮ, 1961 (1961ರ ಕರ್ನಾಟಕ ಅಧಿನಿಯಮ 35), ಆಯುರ್ವೇದ, ಪ್ರಕೃತಿ ಚಿಕಿತ್ಸೆ, ಸಿದ್ಧ, ಯುನಾನಿ ಅಥವಾ ಯೋಗ ವೈದ್ಯವೃತ್ತಿಗರ ನೋಂದಣಿ ಮತ್ತು ವೈದ್ಯವೃತ್ತಿಗರ ಸಂಕೀರ್ಣ ಉಪಬಂಧಗಳ ಅಧಿನಿಯಮ, 1961 (1962ರ ಕರ್ನಾಟಕ ಅಧಿನಿಯಮ 9) ವೈದ್ಯಕೀಯ ನೋಂದಣಿ ಅಧಿನಿಯಮ, (1961 (1961ರ ಕರ್ನಾಟಕ ಅಧಿನಿಯಮ 34) ಭಾರತೀಯ ವೈದ್ಯಕೇಂದ್ರ ಪರಿಷತ್ತು ಅಧಿನಿಯಮ, 1970 (1970ರ ಕೇಂದ್ರ ಅಧಿನಿಯಮ 48) ಹೋಮಿಯೋಪತಿ ಕೇಂದ್ರ ಪರಿಷತ್ತು ಅಧಿನಿಯಮ, 1978 (1973ರ ಕೇಂದ್ರ ಅಧಿನಿಯಮ 59) ಮತ್ತು ವೈದ್ಯ ಪರಿಷತ್ತು ಅಧಿನಿಯಮ, 1956 (1956ರ ಕೇಂದ್ರ ಅಧಿನಿಯಮ 102) ಇವುಗಳಡಿಯಲ್ಲಿ ನೋಂದಾಯಿತನಾದ ಒಬ್ಬ ವ್ಯಕ್ತಿ ಮತ್ತು ದಂತ ವೈದ್ಯರುಗಳ ಅಧಿನಿಯಮ, 1948ರ (1948ರ ಕೇಂದ್ರ ಅಧಿನಿಯಮ 16) ಅಡಿಯಲ್ಲಿ ನೋಂದಾಯಿತನಾದ ಒಬ್ಬ ದಂತ ವೈದ್ಯನನ್ನೂ ಇದು ಒಳಗೊಳ್ಳುತ್ತದೆ.

. . . . 2

ತೆಲಂಗಾಣ ಮತ್ತು ಸೀಮಾಂಧ್ರ ರಾಜ್ಯಗಳ ಮಾದರಿಯಲ್ಲಿ ನುರಿತ ವೈದ್ಯರ ಆಸ್ಪತ್ರೆಗಳಲ್ಲಿ ಸುಮಾರು 5 ರಿಂದ 10 ವರ್ಷಗಳ ಕಾಲ ಪ್ರಥಮೋಪಚಾರದ ಅನುಭವವನ್ನು ಪಡೆದ ಪ್ರಥಮ ಚಿಕಿತ್ಸಕರಿಗೆ ಗ್ರಾಮೀಣ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರಥಮ ಚಿಕಿತ್ಸೆ ನೀಡುವ ಸಲುವಾಗಿ ತರಬೇತಿ ನೀಡಿ ಮುಂದುವರೆಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. ಆದುದರಿಂದ ಕೆ.ಪಿ.ಎಂ.ಇ ಅಧಿನಿಯಮದ ಅಡಿಯಲ್ಲಿ ಪ್ರಥಮ ಚಿಕಿತ್ಸಕರ ನೋಂದಣಿ ಹಾಗೂ ಮಾನ್ಯತೆಗೆ ಅವಕಾಶವಿರುವುದಿಲ್ಲ.

(ಡಾ: ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು

ಸಂಖ್ಯೆ: ಆಕುಕ 28 ಹೆಚ್‌ಪಿಸಿ 2021